ದೂರವಾಣಿ ಸಂಖ್ಯೆ : 080-22212343
ಫ್ಯಾಕ್ಸ್ ಸಂಖ್ಯೆ : 080-22278803
Website : https://kptcl.karnataka.gov.in

ಇ-ಮೇಲ್ ವಿಳಾಸ: director.ahr.kptcl@gmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

ನಿಗಮದ ಗುರುತಿನ ಸಂಖ್ಯೆ (ಸಿ.ಐ.ಎನ್.) : ಯು40109ಕೆಎ1999ಎಸ್‌ಜಿಸಿ025521
ಕಂಪನಿಯ ಅಧಿಕೃತ ಕಛೇರಿ : ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ. ರಸ್ತೆ, ಬೆಂಗಳೂರು-560 009

ಸಂಖ್ಯೆ: ಕವಿಪ್ರನಿನಿ/ಬಿ16/5607(V)/2000-01

ದಿನಾಂಕ : 19 NOV 2022

ಎಲ್ಲಾ ಅಧೀಕ್ಷಕ ಇಂಜಿನಿಯರ್ (ವಿ),
ಕಾರ್ಯ ಮತ್ತು ಪಾಲನಾ ವೃತ್ತಗಳು,
**ಬೆಸ್ಕಾಂ/ಸೆಸ್ಕ್/ಮೆಸ್ಕಾಂ/ಹೆಸ್ಕಾಂ/ಜೆಸ್ಕಾಂ.**

ಮಾನ್ಯರೆ,

ವಿಷಯ: ಕವಿಪ್ರನಿನಿ ನೌಕರಿ ಭರ್ತಿ ಮತ್ತು ಬಡತಿ ನಿಯಮಗಳ ಅಧ್ಯಾಯ-6 ರ ಕ್ರಮ ಸಂಖ್ಯೆ: 12(ಬಿ)(1) ಕೋಟಾದಡಿಯಲ್ಲಿ ನೌಕರರಿಗೆ ಪದೋನ್ನತಿ ನೀಡುವ ಬಗ್ಗೆ.

ಉಲ್ಲೇಖ: 1. ನಿಗಮದ ಸುತ್ತೋಲೆ ಸಂಖ್ಯೆ: ಕವಿಪ್ರನಿನಿ/ಬಿ16/5607(2)/2000-01, ದಿನಾಂಕ: 14.10.2022
2. ರಿಟ್ ಅರ್ಜಿ ಸಂಖ್ಯೆ: 20991/2022 ಕ್ಕೆ ಸಂಬಂಧಿಸಿದಂತೆ, ಕರ್ನಾಟಕ ಮಾನ್ಯ ಉಚ್ಚ ನ್ಯಾಯಾಲಯವು ನೀಡಿರುವ ದಿನಾಂಕ: 16.11.2022 ರ ಮಧ್ಯಂತರ ಆದೇಶ

*****

ಕವಿಪ್ರನಿನಿ ನೌಕರಿ ಭರ್ತಿ ಮತ್ತು ಬಡತಿ ನಿಯಮಗಳ ಅಧ್ಯಾಯ-6 ರ ಕ್ರಮ ಸಂಖ್ಯೆ: 12(ಬಿ) (1) ರಲ್ಲಿ ಸೇವೆಯಲ್ಲಿರುವ ನೌಕರರಿಗೆ ಮೀಸಲಿರಿಸಿದ ಶೇ.10 ರ ಕೋಟಾದಲ್ಲಿ ಕಿರಿಯ ಇಂಜಿನಿಯರ್(ವಿ) ಹುದ್ದೆಯ ಬಡ್ತಿಗೆ ಸಂಬಂಧಿಸಿದಂತೆ, ಅಂತರ್ ವೃತ್ತ ವರ್ಗಾವಣೆ ಹೊಂದಿರುವಂತಹ ನೌಕರರನ್ನು ಜ್ಯೇಷ್ಠತೆಗೆ ಪರಿಗಣಿಸುವ ಬಗ್ಗೆ ಉಲ್ಲೇಖ-1 ರ ದಿನಾಂಕ: 14.10.2022 ರ ಸುತ್ತೋಲೆಯಲ್ಲಿ ಸ್ಪಷ್ಟೀಕರಣವನ್ನು ನೀಡಲಾಗಿತ್ತು.

ನಿಗಮದ ಸದರಿ ಸುತ್ತೋಲೆಯ ವಿರುದ್ಧ ಶ್ರೀ.ನವೀನ್ ಕುಮಾರ್ ಮತ್ತು ಇತರರು ಸಲ್ಲಿಸಿದ್ದ ರಿಟ್ ಅರ್ಜಿ ಸಂಖ್ಯೆ: 20991/2022 ಕ್ಕೆ ಸಂಬಂಧಿಸಿದಂತೆ, ಕರ್ನಾಟಕ ಮಾನ್ಯ ಉಚ್ಚ ನ್ಯಾಯಾಲಯವು, ದಿನಾಂಕ: 16.11.2022ರ ಮಧ್ಯಂತರ ಆದೇಶದಲ್ಲಿ, ನಿಗಮದ ದಿನಾಂಕ: 14.10.2022 ರ ಸುತ್ತೋಲೆಗೆ ತಡೆಯಾಜ್ಞೆಯನ್ನು ನೀಡಿರುತ್ತದೆ.

ಈ ಹಿನ್ನಲೆಯಲ್ಲಿ, ಕವಿಪ್ರನಿನಿ ನೌಕರಿ ಭರ್ತಿ ಮತ್ತು ಬಡತಿ ನಿಯಮಗಳ ಅಧ್ಯಾಯ-6 ರ ಕ್ರಮ ಸಂಖ್ಯೆ: 12(ಬಿ) (1) ರಲ್ಲಿ ಸೇವೆಯಲ್ಲಿರುವ ನೌಕರರಿಗೆ ಮೀಸಲಿರಿಸಿದ ಶೇ.10 ರ **ಕೋಟಾದಲ್ಲಿ ಕಿರಿಯ ಇಂಜಿನಿಯರ್ (ವಿ) ಹುದ್ದೆಯ ಬಡ್ತಿ ನೀಡುವ ಪ್ರಕ್ರಿಯೆಯನ್ನು,** ನಿಗಮದಿಂದ ಮುಂದಿನ ನಿರ್ದೇಶನ ನೀಡುವವರೆಗೂ ಸ್ಥಗಿತಗೊಳಿಸುವಂತೆ ಸೂಚಿಸಲಾಗಿದೆ.

ತಮ್ಮ ವಿಶ್ವಾಸಿ,

ನಿರ್ದೇಶಕರು
(ಆಡಳಿತ ಮತ್ತು ಮಾ.ಸಂ)

ಮು.ತಿ.ನೋ.

**ಮೆಮೋ**

**ಕ್ರಮಾಂಕ:ಚಾವಿಸನಿನಿ/ಆ ಮತ್ತು ಮಾ.ಸಂ./05/04/2022-23/** ಆ8-1263 **ದಿನಾಂಕ:** 23 NOV 2022

ಕವಿಪ್ರನಿನಿ ನೌಕರಿ ಭರ್ತಿ ಮತ್ತು ಬಡತಿ ನಿಯಮಗಳ ಅಧ್ಯಾಯ-6ರ ಕ್ರಮ ಸಂಖ್ಯೆ 12(ಬಿ)(1)ರಲ್ಲಿ ಸೇವೆಯಲ್ಲಿರುವ ನೌಕರರಿಗೆ ಮೀಸಲಿರಿಸಿದ ಶೇಕಡ 10ರ ಕೋಟಾದಲ್ಲಿ ಕಿರಿಯ ಇಂಜಿನಿಯರ್(ವಿ) ಹುದ್ದೆಯ ಬಡ್ತಿ ನೀಡುವ ಪ್ರಕ್ರಿಯೆಯನ್ನು ನಿಗಮದಿಂದ ಮುಂದಿನ ನಿರ್ದೇಶನ ನೀಡುವವರೆಗೂ ಸ್ಥಗಿತಗೊಳಿಸುವಂತೆ ನಿರ್ದೇಶಕರು(ಆ ಮತ್ತು ಮಾಸಂ), ಕವಿಪ್ರನಿನಿ, ಬೆಂಗಳೂರುರವರು ಸೂಚಿಸಿ ಹೊರಡಿಸಿರುವ ಪತ್ರ ಸಂಖ್ಯೆ:ಕವಿಪ್ರನಿನಿ/ಬಿ16/5607(ವಿ)/2000-01 ದಿನಾಂಕ:19.11.2022ನ್ನು ಚಾವಿಸನಿನಿಯಲ್ಲಿ ಯಥಾವತ್ತಾಗಿ ಅಳವಡಿಸಿಕೊಳ್ಳಲಾಗಿದೆ.

ಪ್ರಧಾನ ವ್ಯವಸ್ಥಾಪಕರು(ಆ ಮತ್ತು ಮಾ.ಸಂ)
ಚಾ.ವಿ.ಸ.ನಿ.ನಿ., ಮೈಸೂರು.

**ಪ್ರತಿಗಳು:**

- ಮುಖ್ಯ ಆರ್ಥಿಕ ಅಧಿಕಾರಿ, ಚಾವಿಸನಿನಿ, ಮೈಸೂರುರವರ ಅವಗಾಹನೆಗಾಗಿ.
- ಮುಖ್ಯ ಪ್ರಧಾನ ವ್ಯವಸ್ಥಾಪಕರು(ಆಂ.ಪ), ನಿಗಮ ಕಛೇರಿ, ಮೈಸೂರು.
- ಮುಖ್ಯ ಇಂಜಿನಿಯರ್(ವಿ), ಕಾರ್ಯ ಮತ್ತು ಪಾಲನಾ ವಲಯ, ಚಾವಿಸನಿನಿ, ಹಾಸನ/ಮೈಸೂರು.
- ಎಲ್ಲಾ ಅಧೀಕ್ಷಕ ಇಂಜಿನಿಯರ್(ವಿ), ಕಾರ್ಯ ಮತ್ತು ಪಾಲನಾ ವೃತ್ತ, ಚಾವಿಸನಿನಿ, ಹಾಗೂ ಅಗತ್ಯ ಕ್ರಮಕ್ಕಾಗಿ.
- ಕಂಪನಿ ಕಾರ್ಯದರ್ಶಿ, ನಿಗಮ ಕಛೇರಿ, ಚಾವಿಸನಿನಿ., ಮೈಸೂರುರವರ ಮಾಹಿತಿಗಾಗಿ.
- ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್(ವಿ)/ಲೆಕ್ಕಾಧಿಕಾರಿ/ಲೆಕ್ಕಾಧಿಕಾರಿ(ಆಂ.ಪ), ಕಾರ್ಯ ಮತ್ತು ಪಾಲನಾ ವಿಭಾಗ, ಚಾವಿಸನಿನಿ ರವರ ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ.
- ಉಪ ಪ್ರಧಾನ ವ್ಯವಸ್ಥಾಪಕರು(ಎಂ.ಐ.ಎಸ್), ನಿಗಮ ಕಛೇರಿ, ಮೈಸೂರುರವರಿಗೆ ನಿಗಮದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
- ಮಾನ್ಯ ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು(ತಾಂ)/ಮುಖ್ಯ ಆರ್ಥಿಕ ಸಲಹೆಗಾರರು ಇವರ ಆಪ್ತ ಕಾರ್ಯದರ್ಶಿಗಳಿಗೆ ಕಳುಹಿಸುತ್ತಾ ಪ್ರತಿಯನ್ನು ಮಾನ್ಯ ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು(ತಾಂ)/ ಮುಖ್ಯ ಆರ್ಥಿಕ ಸಲಹೆಗಾರರುರವರ ಗಮನಕ್ಕೆ ತರುವಂತೆ ಕೋರಿದೆ.
- ಸ-2(ಆ ಮತ್ತು ಮಾ.ಸಂ)/ಪ್ರ.ಕ.